**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಡಾಧಿಕಾರಿಗಳ ನ್ಯಾಯಾಲಯ, ಸೋಮವಾರಪೇಟೆ.**

**ಎಂ.ವಿ.ಸಿ ನಂಬರ್ : 39/2024**

ಪಿ.ಡಬ್ಲ್ಯೂ : 1

ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು

ದಿನಾಂಕ :18.07.2024

ಹೆಸರು : ಸಿ.ಆರ್ . ಚೆಂಗಪ್ಪ

**ಮುಖ್ಯವಿಚಾರಣೆ: ಶ್ರೀ ಬಿ.ಜೆ.ಡಿ ವಕೀಲರಿಂದ : ಅರ್ಜಿದಾರರ ಪರವಾಗಿ ಃ**

ನಾನು ಅರ್ಜಿದಾರನಿದ್ದು ನನ್ನ ಮುಖ್ಯ ವಿಚಾರಣೆ ಸಾಕ್ಷ್ಯವಾಗಿ ಶಪಥ ಪತ್ರವನ್ನು ಹಾಜರುಪಡಿಸಿರುತ್ತೇನೆ. ಶಪಥ ಪತ್ರದಲ್ಲಿ ಬರೆಸಿರುವುದನ್ನು ನಾನು ಹೇಳಿ ಬರೆಯಿಸಿದ್ದು ನಂತರ ಅದನ್ನು ಓದಿ ಸಹಿ ಮಾಡಿರುತ್ತೇನೆ. ಶಪಥ ಪತ್ರದಲ್ಲಿ ಬರೆದಿರುವುದು ಎಲ್ಲಾ ಸತ್ಯವಾಗಿರುತ್ತದೆ.

ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ ಪಿ 1 ಎಂದು, ದೂರಿನ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ ಪಿ 2 ಎಂದು, ಸ್ಥಳ ಪಂಚನಾಮೆಯ ಮತ್ತು ನಕಾಶೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ ಪಿ 3 ಎಂದು, ದೋಷಾರೋಪ ಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸದ್ದು ಅದನ್ನು ನಿಪಿ-4 ಎಂದು, ಐ ಎಂ ವಿ ವರದಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ ಪಿ 5 ಎಂದು,

ಗಾಯದ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ ಪಿ 6 ಎಂದು, ಫಾರಂ ನಂಬರ್ 54 ರ ದೃಢೀಕೃತ ಪತ್ರಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು, ಸಿ.ಸಿ 56/2024 ರ ಆದೇಶ ಪುಟದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-8 ಎಂದು, 11 ಮೆಡಿಕಲ್ ಬಿಲ್ಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ-9 ಎಂದು, ಸಿಟಿ ಸ್ಕ್ಯಾನಿಂಗ್ ವರದಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 10 ಎಂದು, ಹೊರರೋಗಿಯ ದಾಖಲಾತಿ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-11 ಎಂದು, 2 ಆರ್.ಟಿ.ಸಿ ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-12 ಮತ್ತು 13 ಎಂದು ಗುರುತಿಸಲಾಯಿತು. ಆದುದರಿಂದ ಅರ್ಜಿಯಲ್ಲಿ ಕೇಳಿದಂತೆ ಆದೇಶ ಮಾಡಬೇಕಾಗಿ ವಿನಂತಿ.

**ಪಾಟೀ ಸವಾಲು : ಪ್ರತಿವಾದಿಗಳು ಏಕಪಕ್ಷೀಯವಾದುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**ಮರುವಿಚಾರಣೆ: ಇರುವುದಿಲ್ಲ**

ಸಾಕ್ಷಿಯ ಹೇಳಿಕೆಯನ್ನು ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು.

ಓ.ಹೇ.ಕೇ.ಸರಿ ಇದೆ

ಸಹಿ/-

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂಡಾಧಿಕಾರಿಗಳು,
ಸೋಮವಾರಪೇಟೆ.